# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-176 ಬಿ.ಟಿ.ಎಂ ಬಡಾವಣೆ ಕಛೇರಿಯಲ್ಲಿ ದಿನಾಂಕ: 17.09.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಬಿ.ಎಂ.,ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿಆರ್/35/2020-21/21-09-2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ.ವೆಂಕಟೇಶ್.ಎಸ್, ಐ.ಆರ್.ಎಸ್, ಜಂಟಿ ಆಯುಕ್ತರು, ಹಣಕಾಸು, ಬಿ.ಬಿ.ಎಂಪಿ.ರವನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಶಿಕ್ಷಣ, ನಗರದ ಸ್ವಚ್ಚತೆ, ರಸ್ತೆ ನಿರ್ವಹಣೆ/ನಿರ್ಮಾಣ, ಬೀದಿ ದೀಪಗಳ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ**

| ಕ್ರಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ವೆಂಕಟೇಶ್.ಎಸ್, ಜಂಟಿ ಆಯುಕ್ತರು, ಹಣಕಾಸು ಬಿ.ಬಿ.ಎಂ.ಪಿ. | 9480685634 |
| 2 | ಶ್ರೀ.ನರೇಶ್‌ಕುಮಾರ್.ಕೆ ಸ.ಇಂ-176 ವಾರ್ಡ್ | 9844407499 |
| 3 | ಶ್ರೀ.ಮಲ್ಲಿಕಾರ್ಜುನ್ ಹಿರಿಯ ಆರೋಗ್ಯ ಪರಿವೀಕ್ಷಕರು | 9740660072 |
| 4 | ಶ್ರೀ. ಪ್ರಹ್ಲಾದ್,ಕಿರಿಯ ಆರೋಗ್ಯಾ ಪರಿವೀಕ್ಷಕರು | 9972320005 |
| 5 | ಶ್ರಿ, ಮುನಿರಾಜು ಸ್ಯಾನಟರಿ ದಫೇದಾರ | 9844884555 |
| 6 | ಶ್ರೀ ಲಿಂಗಮಯ್ಯ ಮೇಲ್ವಿಚಾರಕರು | 9844485981 |
| 7 | ಶ್ರೀ ನರಸಿಂಹ | 9035465589 |
| 8 | ಶ್ರೀ.ಗೋಪಾಲಕೃಷ್ಣ ಅಧ್ಯಕ್ಷರು ಕುವೆಂಪು ನಾಗರೀಕ ವೇದಿಕೆ | 9900111391 |

* * * * * *

ದಿನಾಂಕ-17-09-2021 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

1. **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಸಭೆಗೆ ಹಾಜರಿದ್ದ ಅಧ್ಯಕ್ಷರು ಮಾತನಾಡಿ, ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ಎಸೆಯದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕಸವನ್ನು ವಿಲೇವಾರಿ ಮಾಡುತ್ತಿರುವುದನ್ನು ತಡೆಯಲು ಸಮಗ್ರವಾಗಿ ವಿವರಿಸಿದರು.



Scanned with CamScanner

ಸಭೆಗೆ ಹಾಜರಿದ್ದ, ಶ್ರೀ.ಗೋಪಾಲ ಕೃಷ್ಣ ಮಾತನಾಡಿ ಘನತ್ಯಾಜ್ಯ ನಿರ್ವಹಣೆಗೆ ಹೊಸ ತಾಂತ್ರಿಕ ಸೌಲಭ್ಯಗಳನ್ನು ಅಳವಡಿಸಿಕೊಂಡು ಪೌರಕಾರ್ಮಿಕರ ಹೊರೆಯನ್ನು ತಪ್ಪಿಸಬಹುದು ಎಂದು ಸಭೆಯಲ್ಲಿ ತಿಳಿಸಿದರು. ಮತ್ತು 7ನೇ ಅಡ್ಡರಸ್ತೆ ಮೈಕೋ ಬಡಾವಣೆ ಪ್ರದೇಶದಲ್ಲಿ ಸುಮಾರು ಕಡೆ ಕಸವನ್ನು ಎಸೆಯುತ್ತಿದ್ದು, ಹಾಗೂ ಅಂಗಡಿ ಮಾಲೀಕರುಗಳಿಗೆ ದಂಡವಿಧಿಸಲು ಕೋರಿದರು. ಈ ಬಗ್ಗೆ ಆರೋಗ್ಯ ಇಲಾಖೆಯ ಸಿಬ್ಬಂಧಿರವರು ಮಾತನಾಡಿ ಕೂಡಲೇ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

2. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಬಗ್ಗೆ.

ಸಹಾಯಕ ಅಭಿಯಂತರರು ರವರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳೊಂದಿಗೆ ದೂರವಾಣಿ ಮುಖೇನ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಥವಾ ಪಾದಚಾರಿ ಮಾರ್ಗವನ್ನು ಅಗೆಯುವ ಮುನ್ನ ಬಿ.ಬಿ.ಎಂ.ಪಿ ವತಿಯಿಂದ ಅನುಮತಿ ಪಡೆದು ರಸ್ತೆ ಅಗೆಯುವಂತೆ ತಿಳಿಸಿದರು ಹಾಗೂ ತಮ್ಮ ಇಲಾಖೆವತಿಯಿಂದ ಕೈಗೊಂಡ ಕಾಮಗಾರಿಯ ಅನುಪಯುಕ್ತ ಮಣ್ಣನ್ನು ತೆರವುಗೊಳಿಸಲು ತಿಳಿಸಿದರು.

3. ಬೇಸ್ಕಾಂ ಇಲಾಖೆ ಬಗ್ಗೆ.

ಮಾನ್ಯ ಅಧ್ಯಕ್ಷರು ರವರು ಬೆಸ್ಕಾಂ ಇಲಾಖೆಯ ಕಿರಿಯ ಅಭಿಯಂತರರೊಂದಿಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಥವಾ ಪಾದಚಾರಿ ಮಾರ್ಗವನ್ನು ಅಗೆಯುವ ಮುನ್ನ ಬಿ.ಬಿ.ಎಂ.ಪಿ ವತಿಯಿಂದ ಅನುಮತಿ ಪಡೆದು ರಸ್ತೆ ಅಗೆಯುವಂತೆ ತಿಳಿಸಿದರು ಹಾಗೂ 2ನೆ ಅಡ್ಡರಸ್ತೆ ಮತ್ತು 29ನೇ ಮುಖ್ಯರಸ್ತೆಯಲ್ಲಿ ಅಗೆದಿರುವ ಗುಂಡಿಗಳನ್ನು 1 ವಾರದೊಳಗಾಗಿ ವೈಜ್ಞಾನಿಕವಾಗಿ ಮುಚ್ಚಿ ಕ್ರಮವಹಿಸುವಂತೆ ತಿಳಿಸಿದರು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು

17/9/2024

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:176, ಬಿ.ಟಿ.ಎಂ ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ



Scanned with CamScanner